# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 671 |
| ಸದಸ್ಯರ ಹೆಸರು | : | ಶ್ರೀ ಕೆ. ಹರೀಶ್ ಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 17–12–2021. |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು. |

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>(ಅ)</td><td>ರಾಜ್ಯದಲ್ಲಿರುವ ಗ್ರಾಮ ಪಂಚಾಯಿತಿಗಳ ಸಂಖ್ಯೆ ಎಷ್ಟು; ಇಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಸಂಖ್ಯೆ ಎಷ್ಟು; ಖಾಲಿ ಇರುವ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಹುದ್ದೆಗಳೆಷ್ಟು;</td><td>ರಾಜ್ಯದಲ್ಲಿರುವ ಗ್ರಾಮ ಪಂಚಾಯತಿಗಳು ಮತ್ತು ಅದರಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಹಾಗೂ ಖಾಲಿ ಇರುವ ಹುದ್ದೆಗಳ ವಿವರ ಈ ಕೆಳಕಂಡಂತಿದೆ.
<table>
<tr><th>ಗ್ರಾಮ ಪಂಚಾಯತಿಗಳ ಸಂಖ್ಯೆ</th><th>ಕರ್ತವ್ಯ ನಿರ್ವಹಿಸುತ್ತಿರುವ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಸಂಖ್ಯೆ</th><th>ಖಾಲಿ ಇರುವ ಹುದ್ದೆಗಳ ವಿವರ</th></tr>
<tr><td>5962</td><td>5294</td><td>727</td></tr>
</table></td></tr>
<tr><td>(ಆ)</td><td>ಸದರಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು;</td><td>ಪಂಚಾಯತಿ ಅಭಿವೃದ್ಧಿ ಅಧಿಕಾರಿ ವೃಂದಕ್ಕೆ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯು ನೇಮಕಾತಿ ಪ್ರಾಧಿಕಾರವಾಗಿರುತ್ತಾರೆ. ಆದುದರಿಂದ ಎಲ್ಲಾ ಜಿಲ್ಲೆಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್ ಇವರಿಗೆ ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್–1 ವೃಂದದ ಅರ್ಹ ನೌಕರರು ಲಭ್ಯವಾದಂತೆ ಜೇಷ್ಠತೆ ಮತ್ತು ಅರ್ಹತೆ ಆಧಾರದ ಮೇಲೆ ಮುಂಬಡ್ತಿ ಮೂಲಕ ಭರ್ತಿ ಮಾಡಲು ನಿರ್ದೇಶನ ನೀಡಲಾಗಿದೆ.</td></tr>
<tr><td>(ಇ)</td><td>ಹಾಲಿ ಖಾಲಿ ಇರುವ ಪಂಚಾಯಿತಿ ಕಾರ್ಯದರ್ಶಿಗಳ ಹುದ್ದೆಗಳು ಎಷ್ಟು; ಸದರಿ ಖಾಲಿ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಲಾಗುವುದು? (ವಿವರ ಒದಗಿಸುವುದು)</td><td>ರಾಜ್ಯದಲ್ಲಿನ ಗ್ರಾಮ ಪಂಚಾಯತಿಗಳಲ್ಲಿ 635 ಕಾರ್ಯದರ್ಶಿ ಗ್ರೇಡ್–1 ಹುದ್ದೆಗಳು ಮತ್ತು 956 ಕಾರ್ಯದರ್ಶಿ ಗ್ರೇಡ್–2 ಹುದ್ದೆಗಳು ಖಾಲಿ ಇರುತ್ತವೆ.<br><br>ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಗ್ರೇಡ್–1 ಮತ್ತು ಗ್ರೇಡ್–2 ವೃಂದಕ್ಕೆ ಜಿಲ್ಲಾ ಪಂಚಾಯಿತಿಗಳ ಉಪ ಕಾರ್ಯದರ್ಶಿ (ಅಭಿವೃದ್ಧಿ) ಇವರು ನೇಮಕಾತಿ ಪ್ರಾಧಿಕಾರವಾಗಿರುತ್ತಾರೆ. ಆದುದರಿಂದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಖಾಲಿ ಇರುವ ಕಾರ್ಯದರ್ಶಿ ಗ್ರೇಡ್–1 ಕಾರ್ಯದರ್ಶಿ ಮತ್ತು ಗ್ರೇಡ್–2 ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರದಿಂದ ನಿರ್ದೇಶನ ನೀಡಲಾಗಿದೆ.<br><br>ಹೈದರಾಬಾದ್ ಕರ್ನಾಟಕ ಪ್ರದೇಶವನ್ನು ಹೊರತುಪಡಿಸಿದ ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್–2 ವೃಂದದ 263 ಹುದ್ದೆಗಳು ಮತ್ತು ಹೈದರಾಬಾದ್ ಕರ್ನಾಟಕ ಪ್ರದೇಶದ 80 ಹುದ್ದೆಗಳು ಸೇರಿದಂತೆ ಒಟ್ಟು 343 ಹುದ್ದೆಗಳಿಗೆ ನೇರ ನೇಮಕಾತಿ ಮಾಡಲು ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕ ವೃಂದದ ಹೈದರಾಬಾದ್ ಕರ್ನಾಟಕ ಪ್ರದೇಶವನ್ನು ಹೊರತುಪಡಿಸಿದ 55 ಹುದ್ದೆಗಳು ಮತ್ತು ಹೈದರಾಬಾದ್ ಕರ್ನಾಟಕ ಪ್ರದೇಶದ 103 ಹುದ್ದೆಗಳು ಸೇರಿದಂತೆ ಒಟ್ಟು 158 ಹುದ್ದೆಗಳಿಗೆ ನೇರ ನೇಮಕಾತಿ ಮಾಡಲು ಉದ್ದೇಶಿಸಲಾಗಿದೆ.</td></tr>
</table>

ಸಂಖ್ಯೆ: ಗ್ರಾಅಪ 422 ಗ್ರಾಪಂಅ 2021

**(ಕೆ.ಎಸ್. ಈಶ್ವರಪ್ಪ)**

ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು.

ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು